ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ., ನ್ಯಾಯಾಲಯ,
ಉಡುಪಿ.

ಸಿ.ಸಿಃ 758/ 2024
ಚಾ. ಸಾ 06
ಪ್ರಾ.ಸಾ 06

| | | |
|---|---|---|
| ಸಾಕ್ಷಿದಾರರ ಹೆಸರು | : | ಜೀವನ್ ಕೋಟ್ಯಾನ್ |
| ತಂದೆಯ ಹೆಸರು | : | ಶೇಖರ್ ಕುಂದರ್ |
| ವಯಸ್ಸು | : | 34 |
| ಉದ್ಯೋಗ | : | ಮೀನುಗಾರಿಕೆ |
| ವಾಸಸ್ಥಳ | : | ಮಲ್ಪೆ |

ದಿನಾಂಕಃ 22-04-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಹಿರಿಯ ಸಹಾಯಕ ಅಭಿಯೋಜಕರಿಂದಃ**

ಸಾಕ್ಷಿಗೆ ಒಂದು ನಿಪಿ-2 ದಾಖಲೆಯನ್ನು ತೋರಿಸಲಾಗಿ ಸಾಕ್ಷಿ ಸದರಿ ದಾಖಲೆಯನ್ನು ನೋಡಿ ಒಪ್ಪಿಕೊಂಡ ಮೇರೆಗೆ ಸದ್ರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ2(ಬಿ) ಎಂದು ಗುರುತಿಸಲಾಯಿತು . ಅದನ್ನು ಎಲ್ಲಿ ಬರೆಯಲಾಯಿತು ಎಂದು ಗೊತ್ತಿಲ್ಲ . ನನ್ನ ಸಮಕ್ಷಮ ಪೊಲೀಸರು ಮಹಜರು ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಜಪ್ತಿಪಡಿಸಿಕೊಂಡಿಲ್ಲ . ಅವರ ಕೋರಿಕೆ ಮೇರೆಗೆ ಸದ್ರಿ ದಾಖಲೆಗೆ ಸಹಿ ಮಾಡಿರುತ್ತೇನೆ .

ಮಾನ್ಯ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯವರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕು ಎಂದು ಕೋರಿದ್ದು, ಅವರ ಮನವಿಯನ್ನು ಅಂಗೀಕರಿಸಿ ಅನುಮತಿ ನೀಡಲಾಗಿದೆ.

**ಪಾಟೀ ಸವಾಲುಃ ಹಿರಿಯ ಸಹಾಯಕ ಅಭಿಯೋಜಕರಿಂದಃ**

04-09-2018 ರಂದು ಪೊಲೀಸರು ನನ್ನನ್ನು ಹಾಗೂ ಚಾಸಾ 7 ರವರನ್ನು ತಕ್ಷೀರು ಸ್ಥಳಕ್ಕೆ ಕರೆಸಿದ್ದರು ಎಂದರೆ ಸರಿಯಲ್ಲ . ಅಲ್ಲಿ ಚಾಸಾ 1 ರವರು ತೋರಿಸಿದ ಜಾಗದಲ್ಲಿ

ಬೆಳಿಗ್ಗೆ 11 ಗಂಟೆಯಿಂದ 11.45 ರವರೆಗೆ ನಿಪಿ 2 ರಂತೆ ಮಹಜರು ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ಕಾಲಕ್ಕೆ ಸಿಮೆಂಟ್ ತುಂಡನ್ನು ಪೊಲೀಸರು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ . ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರವಾಗಿ ವಕೀಲರಿಂದಃ**

ಚಾಸಾ 1 ಕರೆದುಕೊಂಡು ಹೋದ ಮೇರೇಗೆ ನಾನು ಮಹಜರಿಗೆ ಮಲ್ಪೆ ಪೊಲೀಸ್ ಠಾಣೆಯಲ್ಲಿ ಮಹಜರಿಗೆ ಸಹಿ ಮಾಡಿರುತ್ತೇನೆ . ಯಾವ ತಾರೀಖು , ತಿಂಗಳು ಮತ್ತು ವರ್ಷದಲ್ಲಿ ಸಹಿ ಮಾಡಿದೆ ಎಂದು ಗೊತ್ತಿಲ್ಲ .

**ಮರು ವಿಚಾರಣೆಃ** ಇಲ್ಲ.

(ತೆರದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ ಎಂದು ಒಪ್ಪಿದರು.

ಪ್ರ.ಹಿ.ಸಿ.ನ್ಯಾ ಮತ್ತು ಸಿ.ಜೆ.ಎಂ
ಉಡುಪಿ.